**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ 55ನೇ ಘಟಿಕೋತ್ಸವದಲ್ಲಿ ಕೃಷಿ ಮತ್ತು ಕೃಷಿ ಸಂಬಂಧಿತ ವಿಷಯಗಳಲ್ಲಿ ಸ್ನಾತಕ ಹಾಗೂ ಸ್ನಾತಕೋತ್ತರ ಪದವಿ ಪೂರೈಸಿದ ಹಾಗೂ ಪದಕಗಳನ್ನು ಪಡೆದ ಎಲ್ಲಾ ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ಹಾಗೂ ಘಟಿಕೋತ್ಸವವನ್ನು ಭೌತಿಕವಾಗಿ ಹಾಗೂ ಆನ್‌ಲೈನ್ ಮೂಲಕ ಆಯೋಜಿಸಿದ ಕೃಷಿ ವಿಶ್ವವಿದ್ಯಾನಿಲಯದ ಎಲ್ಲರಿಗೂ ನನ್ನ ಶುಭಾಷಯಗಳು. ಇಂದು ನಮ್ಮ ರಾಜ್ಯದ ನೂತನ ರಾಜ್ಯಪಾಲರು ಹಾಗೂ ಈ ವಿಶ್ವವಿದ್ಯಾನಿಲಯದ ಕುಲಾಧಿಪತಿಗಳಾದ ಸನ್ಮಾನ್ಯ ತಾವರ್ ಚಂದ್ ಗೆಹ್ಲೋಟ್ ಇವರನ್ನು ಸಹ ಕುಲಾಧಿಪತಿಯಾಗಿ ಈ ಘಟಿಕೋತ್ಸವಕ್ಕೆ ಸ್ವಾಗತಿಸುತ್ತೇನೆ. ಭಾರತೀಯ ಕೃಷಿ ಅನುಸಂಧಾನ ಪರಿಷತ್, ನವದೆಹಲಿಯ ಮಹಾನಿರ್ದೇಶಕರಾದ ಡಾ. ತ್ರಿಲೋಚನ್ ಮಹಪಾತ್ರರವರು ಘಟಿಕೋತ್ಸವದ ಭಾಷಣ ಮಾಡಲು ಒಪ್ಪಿರುವುದರಿಂದ ಅವರಿಗೆ ರಾಜ್ಯ ಸರ್ಕಾರದ ಪರವಾಗಿ ಹಾಗೂ ನನ್ನ ವೈಯಕ್ತಿಕವಾಗಿ ಹೃತ್ಪೂರ್ವಕ ಅಭಿನಂದನೆಗಳು.**

ಕೃಷಿ ಶಿಕ್ಷಣಕ್ಕೆ ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗಿಂತ ವಿದ್ಯಾರ್ಥಿನಿಯರ ಸಂಖ್ಯೆ ಹೆಚ್ಚುತ್ತಾ ಶೇ. 50 ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಪ್ರವೇಶ ಪಡೆಯುತ್ತಿದ್ದಾರೆ. ನಮ್ಮ ದೇಶದ ಮಹಿಳಾ ಉದ್ದಿಮೆದಾರರ ಸಂಖ್ಯೆ ಶೇ. 14 ರಷ್ಟು ಹಾಗೂ ಮಹಿಳಾ ಉದ್ಯೋಗಿಗಳ ಸಂಖ್ಯೆ ಶೇ. 25 ರಷ್ಟು ಮಾತ್ರ ಇರುತ್ತದೆ. ಸ್ನಾತಕ ಹಾಗೂ ಸ್ನಾತಕೋತ್ತರ ಪದವಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಕೃಷಿ ವಿಶ್ವವಿದ್ಯಾನಿಲಯಗಳು ಉದ್ದಿಮೆದಾರರ ನೇರ ಸಂಪರ್ಕ ಕಲ್ಪಿಸಿ ವಿದ್ಯಾರ್ಥಿನಿಯರೂ ಕೂಡಾ ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಮಾಡುವಂತೆ ಹಾಗೂ ಮಹಿಳಾ ಉದ್ದಿಮೆದಾರರಾಗುವಂತೆ ಪ್ರೇರೇಪಿಸಬೇಕಾಗುತ್ತದೆ. ಕೃಷಿ ನವೋದ್ಯಮಗಳನ್ನು ಪ್ರಾರಂಭಿಸುವಂತೆ ನೂತನ ಕಾರ್ಯಕ್ರಮಗಳನ್ನು ರೂಪಿಸಿ ಸ್ನಾತಕೋತ್ತರ ಪದವಿಯ ಬಳಿಕ ಉದ್ಯಮ ಹಾಗೂ ಶಿಕ್ಷಣ ಸಂಸ್ಥೆಗಳ ಮಧ್ಯೆ ಸಹಯೋಗ ಮೂಡುವಂತೆ ಕಾರ್ಯಕ್ರಮಗಳನ್ನು ರೂಪಿಸಲು ಈ ಮೂಲಕ ವಿಶ್ವವಿದ್ಯಾನಿಲಯಗಳಿಗೆ ಕರೆ ನೀಡುತ್ತೇನೆ. ಕೃಷಿಕರ ಕೋಟಾದಡಿ ಕೃಷಿ ವಿಶ್ವವಿದ್ಯಾನಿಲಯಗಳಿಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಶೇ. 40 ರಿಂದ 50 ರವರೆಗೆ

ಮೀಸಲಾತಿಯನ್ನು ಈ ಸಾಲಿನಿಂದ ಹೆಚ್ಚಿಸಲಾಗಿದೆ. ರಾಜ್ಯದಲ್ಲಿ ಸಣ್ಣ ಹಾಗೂ ಅತಿ ಸಣ್ಣ ರೈತರ ಆದಾಯವನ್ನು ಹೆಚ್ಚಿಸಲು ಕೃಷಿ ಯಂತ್ರೋಪಕರಣಗಳ ಅವಿಷ್ಕಾರ ಹಾಗೂ ಅವುಗಳ ಬಳಕೆಗೆ ಹೆಚ್ಚಿನ ಆಧ್ಯತೆಯನ್ನು ನೀಡಲಾಗಿದೆ. ಮುಂದುವರಿದು ಸಿರಿಧಾನ್ಯಗಳ ಉತ್ಪಾದನೆ–ಉತ್ಪಾದಕತೆ ಹಾಗೂ ಬಳಕೆಗೆ ಹೆಚ್ಚಿನ ಆಧ್ಯತೆ ನೀಡಬೇಕಾಗಿದೆ.

ನಮ್ಮ ದೇಶದ ಸನ್ಮಾನ್ಯ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಜಿಯವರು ಆತ್ಮ ನಿರ್ಭರ ಯೋಜನೆಯನ್ನು ಜಾರಿಗೆ ತಂದು ಒಂದು ಲಕ್ಷ ಕೋಟಿ ರೂಪಾಯಿಗಳನ್ನು ಕೃಷಿ ಮೂಲ ಸೌಲಭ್ಯಗಳನ್ನು ಕಲ್ಪಿಸಲು ಹಾಗೂ ಆಹಾರ ಸಂಸ್ಕರಣೆ ಉದ್ಯಮಕ್ಕಾಗಿ ಹತ್ತು ಸಾವಿರ ಕೋಟಿ ರೂಪಾಯಿಗಳನ್ನು ದೇಶದ್ಯಂತ ಒದಗಿಸಿದ್ದು, ಜಿಲ್ಲಾವಾರು ಓ.ಡಿ.ಓ.ಪಿ (ಒಂದು ಜಿಲ್ಲೆ ಒಂದು ಪದಾರ್ಥ) ಕುರಿತು ಉದ್ದಿಮೆಗಳನ್ನು ಪ್ರಾರಂಭಿಸಲು ಗರಿಷ್ಠ ಹತ್ತು ಲಕ್ಷ ಸಹಾಯಧನವನ್ನು ಒದಗಿಸುತ್ತಿದ್ದು, ಪದವಿ ಪಡೆದ ವಿದ್ಯಾರ್ಥಿಗಳು ಉದ್ಯೋಗವನ್ನು ಅರಸಿಕೊಂಡು ಹೋಗುವುದಕ್ಕಿಂತ (ಜಾಬ್ ಸೀಕರ್) ತಾವೇ ಉದ್ದಿಮೆದಾರರಾಗಿ ಇನ್ನೋರ್ವರಿಗೆ ಉದ್ಯೋಗವನ್ನು ಒದಗಿಸುವಂತಾಗಬೇಕೆಂದು (ಜಾಬ್ ಪ್ರೊವೈಡರ್ಸ್) ಕರೆ ನೀಡುತ್ತೇನೆ.

ಇತ್ತೀಚಿನ ದಿನಗಳಲ್ಲಿ ರಾಷ್ಟ್ರದ ಬಹುತೇಕ ಕೃಷಿ ವಿಶ್ವವಿದ್ಯಾನಿಲಯಗಳಲ್ಲಿ ಅನುದಾನದ ಹಾಗೂ ಮಾನವ ಸಂಪನ್ಮೂಲದ ಕೊರತೆ ಹೆಚ್ಚಾಗುತ್ತಿದೆ. ಅದರಲ್ಲಿ ವಿಶೇಷವಾಗಿ ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ರಾಜ್ಯದಲ್ಲಿ ಮಾತೃ ಸಂಸ್ಥೆಯಾಗಿದ್ದು, 55 ವರ್ಷಗಳ ಕೃಷಿ ವಿಶ್ವವಿದ್ಯಾನಿಲಯವಾಗಿದ್ದು, ಪ್ರತಿ ವರ್ಷ ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯ ಪಾಧ್ಯಾಪಕರು ಹಾಗೂ ಶಿಕ್ಷಕೇತರ ಸಿಬ್ಬಂದಿಗಳು ನಿವೃತ್ತಿ ಹೊಂದುತ್ತಿರುವುದು ನನ್ನ ಗಮನಕ್ಕೆ ಬಂದಿರುತ್ತದೆ. ಈ ಕುರಿತು ಕೃಷಿ ವಿಶ್ವವಿದ್ಯಾಲಯದ ನೇಮಕಾತಿ ಪ್ರಸ್ತಾವನೆಯನ್ನು ಸನ್ಮಾನ್ಯ ಮುಖ್ಯಮಂತ್ರಿಗಳೊಂದಿಗೆ ಈಗಾಗಲೇ ನಾನು ಚರ್ಚಿಸಿದ್ದೇನೆ. ಕೃಷಿ ವಿಜ್ಞಾನ ಕೇಂದ್ರ ಹಾಗೂ ಎ.ಐ.ಸಿ.ಆರ್.ಪಿ. ಯೋಜನೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕುಲಪತಿಗಳಿಗೆ ಹುದ್ದೆಗಳು ಖಾಲಿಯಾದಂತೆ ನೇಮಕಾತಿ ಮಾಡಿಕೊಳ್ಳಲು ಅನುಮತಿ ನೀಡುವಂತೆ ಸನ್ಮಾನ್ಯ ಮುಖ್ಯಮಂತ್ರಿಯವರಿಗೆ ವಿನಂತಿಸಲಾಗಿದೆ.

ಈ ದಿಸೆಯಲ್ಲಿ ವಿಶ್ವವಿದ್ಯಾನಿಲಯವು ಇತ್ತೀಚೆಗೆ ವಿಶ್ವವಿದ್ಯಾನಿಲಯದ ಅಧಿಕಾರಿಗಳ ಹುದ್ದೆಗಳನ್ನು ನೇಮಕಾತಿ ಮಾಡಲಾಗಿರುತ್ತದೆ. ಇವರೆಲ್ಲರಿಗೂ ನನ್ನ ಅಭಿನಂದನೆಗಳು.

ರಾಜ್ಯದಲ್ಲಿ ಇನ್ನು ಮುಂದೆ ಸಂಶೋಧನೆ, ಬೋಧನೆ ಮತ್ತು ವಿಸ್ತರಣಾ ವಿಭಾಗಗಳಿಗೆ ಇನ್ನೂ ಹೆಚ್ಚಿನ ಅನುದಾನ ಒದಗಿಸುವ ನಿಟ್ಟಿನಲ್ಲಿ ಪ್ರಯತ್ನ ಮಾಡಲಾಗುವುದೆಂದು ಈ ಮೂಲಕ ತಿಳಿಸಲು ಇಚ್ಚಿಸುತ್ತೇನೆ. ಅದರಂತೆ, ಕುಲಪತಿಗಳು ಸಹ ರಾಜ್ಯದ ರೈತರಿಗೆ ವಿವಿಧ ಬೆಳೆಗಳಲ್ಲಿ ನೂತನ ತಳಿಗಳನ್ನು ಬಿಡುಗಡೆಗಾಗಿ ಸಂಶೋಧನೆಯನ್ನು ಬಲವರ್ಧನೆಗೊಳಿಸಿ, ರೈತರ ಬೆಳೆ ಇಳುವರಿ ಹೆಚ್ಚಿಸಲು ಪ್ರಯತ್ನಿಸಬೇಕೆಂದು ಈ ಮೂಲಕ ಕೋರುತ್ತೇನೆ.

ಕೃಷಿ ವಿಶ್ವವಿದ್ಯಾನಿಲಯಗಳಲ್ಲಿ ಪ್ರಾರಂಭಿಸಿದ ಆಹಾರ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಕೃಷಿ ಇಂಜಿನಿಯರಿಂಗ್ ಸ್ನಾತಕ ಪದವೀಧರರಿಗೆ ರಾಜ್ಯ ಸರ್ಕಾರದ ಸಹಾಯಕ ಕೃಷಿ ಅಧಿಕಾರಿ ಹಾಗೂ ಕೃಷಿ ಅಧಿಕಾರಿ ಹುದ್ದೆಗಳಲ್ಲಿ ನೇರ ನೇಮಕಾತಿಗೆ ಅವಕಾಶವಿರಲಿಲ್ಲ. ಕೃಷಿ ಇಲಾಖೆಯಲ್ಲಿ ಕಳೆದ 20 ವರ್ಷಗಳಿಂದ ಬದಲಾವಣೆ ಆಗದೇ ಇರುವ ವೃಂದ ಹಾಗೂ ನೇಮಕಾತಿ ನಿಯಮಗಳನ್ನು ಇತ್ತೀಚೆಗೆ ಸೂಕ್ತ ಬದಲಾವಣೆ ತಂದು ಶೇ. 15 ರಷ್ಟು ಹುದ್ದೆಗಳನ್ನು ಆಹಾರ ತಂತ್ರಜ್ಞಾನ, ಕೃಷಿ ಇಂಜಿನಿಯರಿಂಗ್ ಹಾಗೂ ಜೈವಿಕ ತಂತ್ರಜ್ಞಾನ, ಸ್ನಾತಕ ಪದವೀಧರರಿಗೆ ಮೆರಿಟ್ ಆಧಾರದ ಮೇಲೆ ನೀಡಲು ನಿಯಮಾವಳಿ ರಚಿಸಲಾಗಿದೆ.

ಕೃಷಿ ಪದವಿಗಳ ಶೈಕ್ಷಣಿಕ ಪಠ್ಯಕ್ರಮದಲ್ಲಿ ಕೃಷಿ ವಿಜ್ಞಾನದ ಜೊತೆ ಸಂಸ್ಕರಣೆ, ಮಾರುಕಟ್ಟೆ, ಮೌಲ್ಯ ವರ್ಧನೆ, ಕೃಷಿ ನವೋದ್ಯಮ ಹಾಗೂ ಆಧುನಿಕ ತಂತ್ರಜ್ಞಾನದ ವಿಷಯಗಳಾದ ಡ್ರೋನ್ ಆಧಾರಿತ ತಂತ್ರಜ್ಞಾನ, ನ್ಯಾನೋಟೆಕ್ನಾಲಜಿ ಹಾಗೂ ಕೃತಕ ಬುದ್ಧಿವಂತಿಕೆ ಕುರಿತು ಅಧ್ಯಯನ ಮಾಡಲು ಸೂಕ್ತ ಪಠ್ಯಕ್ರಮದಲ್ಲಿ ಬದಲಾವಣೆ ತರುವುದು ಅವಶ್ಯವಿರುವುದರಿಂದ ಈ ಕುರಿತು ಶೈಕ್ಷಣಿಕ ಪರಿಷತ್ತಿನಲ್ಲಿ ಸೂಕ್ತ ನಿಯಮಾವಳಿಗಳನ್ನು ತರಲು ಈ ಮೂಲಕ ಸೂಚಿಸುತ್ತೇನೆ. ಈ ದಿಸೆಯಲ್ಲಿ

ರಾಜ್ಯ ಸರ್ಕಾರವು 770 ಕೋಟಿ ರೂಪಾಯಿಗಳ ಅನುದಾನದೊಂದಿಗೆ ರಾಜ್ಯದ 4 ವಿಶ್ವವಿದ್ಯಾಲಯಗಳ 7 ಕೇಂದ್ರಗಳಲ್ಲಿ ಸಿಡ್ಸಾ (ಸೆಂಟರ್ ಆಫ್ ಇನೋವೇಷನ್ ಅಂಡ್ ಡೆವೆಲಪ್‌ಮೆಂಟ್ ಇನ್ ಸ್ಮಾರ್ಟ್ ಅಗ್ರಿಕಲ್ಚರ್) ಕೇಂದ್ರಗಳನ್ನು ಪ್ರಾರಂಭಿಸಲು ಈಗಾಗಲೇ ಸಂಪುಟ ಸಭೆಯಲ್ಲಿ ಅನುಮತಿ ನೀಡಲಾಗಿದೆ. ಈ ಯೋಜನೆಯು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಬೆಂಗಳೂರು ಹಾಗೂ ಚಾಮರಾಜನಗರಗಳಲ್ಲಿ ಜಾರಿಗೆ ತರಲಾಗುವುದು. ಒಂದು ಕೇಂದ್ರಕ್ಕೆ ಹೆಕ್ಸಾಗನ್ ಕಂಪನಿಯವರು 95 ಕೋಟಿ ರೂಪಾಯಿಗಳನ್ನು ಹಾಗೂ ಕರ್ನಾಟಕ ಸರ್ಕಾರ 15 ಕೋಟಿ ರೂಪಾಯಿಗಳನ್ನು ಒದಗಿಸಿ, ಒಟ್ಟು ಪ್ರತಿ ಕೇಂದ್ರಕ್ಕೆ 110 ಕೋಟಿ ರೂಪಾಯಿಗಳ ಅನುದಾನವನ್ನು ಮೀಸಲಿಡಲಾಗಿದೆ. ಇದಲ್ಲದೇ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ರೈತ ಉತ್ಪಾಧನಾ ಕೇಂದ್ರಗಳನ್ನು (ಎಫ್.ಪಿ.ಓ) ದತ್ತು ಪಡೆದು ಸಲಹೆ ನೀಡಲು ಈ ಮೂಲಕ ಸೂಚಿಸುತ್ತೇನೆ.

ಸ್ನಾತಕ ಪದವಿ ಪಡೆದ ಬಹುತೇಕ ವಿದ್ಯಾರ್ಥಿಗಳು ಸ್ನಾತಕೋತ್ತರ ಪದವಿಗೆ ಪ್ರವೇಶ ಪಡೆಯುವರು. ಕೆಲವರು ಕೃಷಿ ನವೋಧ್ಯಮಗಳನ್ನು ಪ್ರಾರಂಭಿಸಲು ಹಾಗೂ ಸ್ವತ: ಕೃಷಿ ಮಾಡಲು ಸಜ್ಜಾಗಬಹುದು, ಇನ್ನೂ ಕೆಲವರು ಭಾರತೀಯ ಆಡಳಿತ ಸೇವೆ ಹಾಗೂ ಅರಣ್ಯ ಸೇವೆ ಪರೀಕ್ಷೆಗಳಿಗೆ ತಯಾರಿ ಮಾಡಿಕೊಳ್ಳಬಹುದು. ಇನ್ನೂ ಕೆಲವರು ನೇರವಾಗಿ ಉದ್ಯೋಗ ಹುಡಿಕಿಕೊಂಡು ಹೋಗಬಹುದು. ಇಂದು ಪದವಿ ಗ್ರಹಣ ಮಾಡಿದ ಎಲ್ಲ ವಿದ್ಯಾರ್ಥಿಗಳಿಗೂ ತಮ್ಮ ಮುಂದಿನ ಜೀವನದಲ್ಲಿ ಯಶಸ್ಸು ದೊರೆಯಲೆಂದು ಮತ್ತು ಈ ನಿಮ್ಮ ಯಶಸ್ಸಿಗೆ ಕಾರಣರಾದ ಎಲ್ಲಾ ಶಿಕ್ಷಕರಿಗೂ ಹಾಗೂ ಪಾಲಕರಿಗೂ ಈ ಶುಭ ಸಂದರ್ಭದಲ್ಲಿ ನನ್ನ ಶುಭ ಕಾಮನೆಗಳನ್ನು ತಿಳಿಸಲು ಇಚ್ಛಿಸುತ್ತೇನೆ.

**ಜೈ ಹಿಂದ್ ಜೈ ಕರ್ನಾಟಕ ಜೈ ಕಿಸಾನ್ !!!**